## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | ~~1789~~ 1563 (1789) |
| ಸದಸ್ಯರ ಹೆಸರು | : | ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 24-03-2020 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯ ಮಡಿಕೇರಿ ನಗರಸಭೆಯು ತನ್ನತ್ಯಾಜ್ಯ ಸಂಸ್ಕರಣಾ ಘಟಕವನ್ನು ಸ್ಟೋನ್ ಹಿಲ್ ಎಂಬ ಪ್ರದೇಶದಲ್ಲಿ ಹೊಂದಿದ್ದು, ಸದರಿ ಘಟಕವು ಜನವಸತಿಯ ಮಧ್ಯಭಾಗದಲ್ಲಿ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೊಡಗು ಜಿಲ್ಲೆಯ ಮಡಿಕೇರಿ ನಗರಸಭೆಯ ಘನತ್ಯಾಜ್ಯವನ್ನು ಕರ್ಣಂಗೇರಿ ಗ್ರಾಮದ ಸರ್ವೆ ನಂ 47/1 ರಲ್ಲಿ 6 ಎಕರೆ, ಸಂಸ್ಕರಣೆ ಜಾಗದಲ್ಲಿ ವಸ್ತು ವಿಲೇವಾರಿ ಮಾಡಲಾಗುತ್ತಿದೆ. ಸದರಿ ಜಾಗವನ್ನು 2005 ರಲ್ಲಿ ಜಿಲ್ಲಾಧಿಕಾರಿಯವರು ಮಂಜೂರು ಮಾಡಿರುತ್ತಾರೆ. ಅಂದಿನ ಮಡಿಕೇರಿ ನಗರದ ಜನಸಂಖ್ಯೆ 30,000 ಗಳಾಗಿದ್ದು, ಜನಸಂಖ್ಯೆಗೆ ತಕ್ಕಂತೆ 6 ಎಕರೆ ಸ್ಥಳ ಮಂಜೂರು ಮಾಡಲಾಗಿತ್ತು. ಈ ಸ್ಥಳವನ್ನು ಪರಿಸರ ಮಾಲಿನ್ಯ ಅಧಿಕಾರಿಯವರು ಪರಿಶೀಲಿಸಿ ಒಪ್ಪಿಗೆ ನೀಡಿದ ಮೇರೆಗೆ, ಕಸ ವಿಲೇವಾರಿ ಮಾಡಲಾಗುತ್ತಿತ್ತು. ಈ ಹಿಂದೆ ಸದರಿ ಜಾಗದ ಸಮೀಪದಲ್ಲಿ ಮನೆಗಳ ಸಂಖ್ಯೆ ಕಡಿಮೆ ಇದ್ದು, ಜನ ವಸತಿ ಸ್ಥಳವಾಗಿರಲಿಲ್ಲ. ಇತ್ತೀಚೆಗೆ ಈ ಸ್ಥಳದ ಅಕ್ಕಪಕ್ಕದಲ್ಲಿ ಮನೆಗಳು ನಿರ್ಮಾಣಗೊಂಡಿದ್ದು, ಇವರುಗಳಿಂದ ದೂರುಗಳು ಬಂದಿರುತ್ತವೆ |
| ಆ) | ಬಂದಿದ್ದಲ್ಲಿ, ಸದರಿ ಘಟಕವನ್ನು ಜನವಸತಿ ಪ್ರದೇಶದಿಂದ ದೂರದ ಪ್ರದೇಶಕ್ಕೆ ಸ್ಥಳಾಂತರಿಸಲು ಕ್ರಮ ಕೈಗೊಳ್ಳಲಾಗಿದೆಯೇ; | ಮಡಿಕೇರಿ ನಗರದಲ್ಲಿ ಜೀವನ ಶೈಲಿ ಬದಲಾವಣೆಯಿಂದಾಗಿ ತ್ಯಾಜ್ಯ ಉತ್ಪತ್ತಿಯು ಹೆಚ್ಚಾಗುತ್ತಿರುವುದರಿಂದ ಅಗತ್ಯವಿರುವ ಹೆಚ್ಚುವರಿ 6 ಎಕರೆ ಸ್ಥಳ ಮಂಜೂರಾತಿಗಾಗಿ ಪ್ರಸ್ತಾವನೆಯನ್ನು ತಹಶೀಲ್ದಾರ್‌ರವರಿಗೆ ನಗರಸಭೆಯಿಂದ ಸಲ್ಲಿಸಲಾಗಿದ್ದು, ಮಂಜೂರಾತಿಗಾಗಿ ಬಾಕಿಯಿರುತ್ತದೆ. |
| ಇ) | ಕ್ರಮಕೈಗೊಂಡಿದ್ದಲ್ಲಿ, ಸ್ಥಳಾಂತರದ ನಂತರ ಸದರಿ ಘಟಕವನ್ನು ಎಷ್ಟು ವಿಸ್ತೀರ್ಣದಲ್ಲಿ, ಯಾವ ಸ್ಥಳದಲ್ಲಿ ನಿರ್ಮಾಣ ಮಾಡಲಾಗುವುದು? | |

ಸಂಖ್ಯೆ: ನಅಇ 109 ಸಿಎಸ್‌ಎಸ್ 2020

(ನಾರಾಯಣ ಗೌಡ)
ಪೌರಾಡಳಿತ ಹಾಗೂ
ತೋಟಗಾರಿಕೆ ಮತ್ತು ರೇಷ್ಮೆ ಸಚಿವರು.